ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರೈಲ್ವೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 21/09/2019

# ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣಕ್ಕೆ ಇನ್ಫೋಸಿಸ್ ಹೆಸರು

## ಸರ್ಕಾರ ಆದೇಶ | 30 ವರ್ಷ ಇನ್ಫಿ ಫೌಂಡೇಷನ್ ನಿರ್ವಹಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 21/9/19

ಮೆಟ್ರೋ 2ನೇ ಹಂತದಲ್ಲಿ ನಿರ್ಮಾಣಗೊಳ್ಳಲಿರುವ ಎಲೆಕ್ಟ್ರಾನಿಕ್ ಸಿಟಿ ಮಾರ್ಗದ ಕೋನಪ್ಪನ ಅಗ್ರಹಾರದ ಮೆಟ್ರೋ ನಿಲ್ದಾಣಕ್ಕೆ ಇನ್ಫೋಸಿಸ್ ಫೌಂಡೇಷನ್ ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣ ಎಂದು ನಾಮಕರಣ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮುಂದಿನ 30 ವರ್ಷಗಳ ಕಾಲ ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣದ ಹೆಸರು, 'ಇನ್ಫೋಸಿಸ್ ಫೌಂಡೇಷನ್ ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣ' ಎಂದು ಇರಲಿದೆ. ಹಾಗೆಯೇ ಈ ಅವಧಿಯಲ್ಲಿ ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣದ ನಿರ್ವಹಣೆ ಜವಾಬ್ದಾರಿಯನ್ನು ಇನ್ಫೋಸಿಸ್ ಫೌಂಡೇಷನ್ ನಿರ್ವಹಿಸಲಿದೆ. ಈ ಕುರಿತು ಬೆಂಗಳೂರು ಮೆಟ್ರೋ ರೈಲು ನಿಗಮ(ಬಿಎಂಆರ್‌ಸಿಎಲ್) ಮತ್ತು ಇನ್ಫೋಸಿಸ್ ಫೌಂಡೇಷನ್ ಒಪ್ಪಂದ ಮಾಡಿಕೊಂಡಿವೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ. ಎಲೆಕ್ಟ್ರಾನಿಕ್ ಸಿಟಿ ಬಳಿಯ ಕೋನಪ್ಪನ ಅಗ್ರಹಾರ ಮೆಟ್ರೋ ನಿಲ್ದಾಣ ಕಾಮಗಾರಿ ಕೈಗೊಳ್ಳಲು ಇನ್ಫೋಸಿಸ್ ಪ್ರತಿಷ್ಠಾನ ₹200 ಕೋಟಿ ದೇಣಿಗೆ ನೀಡಿತ್ತು.

### ಆರ್.ವಿ.ರಸ್ತೆ, ಬೊಮ್ಮಸಂದ್ರ ಮಾರ್ಗಕ್ಕೆ ₹5744 ಕೋಟಿ ವೆಚ್ಚ

2ನೇ ಹಂತದ ಮೆಟ್ರೋ ಯೋಜನೆಯಲ್ಲಿ ಆರ್.ವಿ.ರಸ್ತೆಯಿಂದ ಬೊಮ್ಮಸಂದ್ರದ ವರೆಗೂ 18.8 ಕಿ.ಮೀ. ಮೆಟ್ರೋ ಮಾರ್ಗ ನಿರ್ಮಾಣಗೊಳ್ಳಲಿದ್ದು, ಸುಮಾರು ₹5744 ಕೋಟಿ ವೆಚ್ಚ ಅಂದಾಜಿಸಲಾಗಿದೆ. 18.8 ಕಿ.ಮೀ ಉದ್ದದ 16 ನಿಲ್ದಾಣಗಳನ್ನು ಒಳಗೊಂಡ ಆರ್.ವಿ.ರಸ್ತೆ- ಬೊಮ್ಮಸಂದ್ರ ಮಾರ್ಗದ ಕಾಮಗಾರಿ 3 ಪ್ಯಾಕೇಜ್‌ಗಳಡಿ ನಡೆಯುತ್ತಿದೆ. ಆರ್.ವಿ.ರಸ್ತೆ-ಎಚ್‌ಎಸ್‌ಆರ್‌ಲೇಔಟ್(6.34 ಕಿ.ಮೀ), ಎಚ್‌ಎಸ್‌ಆರ್‌ಲೇಔಟ್- ಹೊಸರಸ್ತೆ (6.4 ಕಿಮೀ), ಹೊಸ ರಸ್ತೆ- ಬೊಮ್ಮಸಂದ್ರ (6.41 ಕಿ.ಮೀ) ಕಾಮಗಾರಿ ನಡೆಯುತ್ತಿದ್ದು, 2021ಕ್ಕೆ ಕಾಮಗಾರಿ ಪೂರ್ಣಗೊಳ್ಳುವ ನಿರೀಕ್ಷೆ ಇದೆ ಎಂದು ಅಧಿಕಾರಿಗಳು ಹೇಳಿದ್ದಾರೆ.